ಜೆಎಸ್ಎಸ್ ಮಹಾವಿದ್ಯಾಪೀಠ

# ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
ಊಟಿರಸ್ತೆ, ಮೈಸೂರು-570 025, ಕರ್ನಾಟಕ

☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ: 15.03.2016

**<u>ಪ್ರಕಟಣೆ ಕೃಪೆಗಾಗಿ</u>**

## ಕೃಷಿಯ ಸುಸ್ಥಿರ ಬೆಳವಣಿಗೆ ಅತ್ಯಗತ್ಯ

– ಡಾ ಕೆ ನಾರಾಯಣಗೌಡ

ಮೈಸೂರು ನಗರದ ಬಿ ಎನ್ ರಸ್ತೆಯಲ್ಲಿರುವ ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಜೆಎಸ್ಎಸ್ ಮಹಾವಿದ್ಯಾಪೀಠದ ಸಂಸ್ಥಾಪಕರಾದ ಜಗದ್ಗುರು ಡಾ ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಜನ್ಮ ಶತಮಾನೋತ್ಸವ ಮತ್ತು ಕಾಲೇಜಿನ ಸುವರ್ಣ ಮಹೋತ್ಸವದ ಅಂಗವಾಗಿ **'ಸುಸ್ಥಿರ ಕೃಷಿಯ ಮುಂದಿರುವ ಅವಕಾಶಗಳು ಸವಾಲುಗಳು ಹಾಗೂ ತಂತ್ರಗಳ'** ಬಗ್ಗೆ ಏರ್ಪಡಿಸಿದ್ದ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಬೆಂಗಳೂರು ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾನಿಲಯದ ವಿಶ್ರಾಂತ ಕುಲಪತಿಗಳಾದ ಡಾ ಕೆ ನಾರಾಯಣಗೌಡರವರು ಉದ್ಘಾಟಿಸಿದರು.ಅವರು ತಮ್ಮ ಉದ್ಘಾಟನಾ ಭಾಷಣದಲ್ಲಿ ದೇಶದ ಬೆನ್ನೆಲುಬು ಕೃಷಿ, ಭಾರತದಲ್ಲಿ ಶೇ ೫೫ ರಷ್ಟು ಜನರು ಕೃಷಿಯನ್ನೇ ಅವಲಂಭಿಸಿದ್ದಾರೆ, ನೈಸರ್ಗಿಕ ಸಂಪನ್ಮೂಲಗಳನ್ನು ಹೊಂದಿರುವ ಶ್ರೀಮಂತ ದೇಶ ಮತ್ತು ಸಮೃದ್ಧವಾದ ಬಡ ಭಾರತ ಎಂದರು. ಇದಕ್ಕೆ ಮುಖ್ಯ ಕಾರಣ ಪ್ರದೇಶ, ಮಣ್ಣು ಮತ್ತು ಸೌರಶಕ್ತಿ. ಬೇರೆ ದೇಶಗಳಿಗೆ ಹೋಲಿಸಿದರೆ ನಮ್ಮ ದೇಶ ಕೃಷಿಗೆ ಉತ್ತಮವಾಗಿದೆ. ಎಲ್ಲಾ ರೀತಿಯ ಸೌಲಭ್ಯ ಸರ್ಕಾರದಿಂದ ರೈತರಿಗೆ ದೊರಕಿದರೆ, ರೈತರು ಮುಂದೆ ಬರಬಹುದು ಮತ್ತು ರೈತರು ಎಲ್ಲಾ ರೀತಿಯಲ್ಲೂ ಕಲಿಯಲು ಆಸಕ್ತಿವಹಿಸಬೇಕು ಎಂದು ಅಭಿಪ್ರಾಯ ಪಟ್ಟರು. ಆಗ ಮಾತ್ರ ಸುಸ್ಥಿರ ಕೃಷಿ ಅಭಿವೃದ್ಧಿ ಸಾಧ್ಯ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ದಾರವಾಡದ ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯ, ವಿಶ್ರಾಂತ ಕುಲಪತಿಗಳು ಮತ್ತು ಜೆಎಸ್ಎಸ್ ಮಹಾವಿದ್ಯಾಪೀಠದ ಗ್ರಾಮೀಣ ಅಭಿವೃದ್ಧಿ ವಿಭಾಗದ ನಿರ್ದೇಶಕರಾದ ಪದ್ಮಭೂಷಣ ಡಾ. ಎಂ. ಮಹದೇವಪ್ಪ ನವರು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ರೈತರ ಬಗ್ಗೆ ನಾವು ಹೆಚ್ಚು ಗಮನ ಕೊಡುತ್ತಿಲ್ಲ. ವಿಜ್ಞಾನ ಮತ್ತು ತಂತ್ರಜ್ಞಾನಗಳನ್ನು ಸರಿಯಾಗಿ ಬಳಸಿಕೊಳ್ಳುವುದರಲ್ಲಿ ಭಾರತದೇಶ ಹಿಂದುಳಿದಿದೆ. ಇಂದಿನ ಯುವಕರು ಬುದ್ಧಿವಂತರಾಗಿರುವುದರಿಂದ ಅವರು ಮನಸ್ಸುಮಾಡಿದರೆ ಸಾಕು ಯಾವುದೇ ಬಜೆಟ್‌ನ ಅವಶ್ಯಕತೆ ಇಲ್ಲದೆ ನಮ್ಮ ಕೃಷಿ ಮತ್ತು ರೈತರನ್ನು ಉದ್ದಾರ ಮಾಡಬಹುದು ಆದರೆ ಮನಸ್ಸು ಮಾಡಬೇಕು ಎಂದು ತಿಳಿಸಿದರು. ಅಂತೆಯೇ ವಿಚಾರ ಸಂಕಿರಣವನ್ನು ಆಯೋಜಿಸಿರುವ ಕಾಲೇಜನ್ನು ಅಭಿನಂದಿಸಿದರು.

ಸುತ್ತೂರಿನ ಜೆಎಸ್ಎಸ್ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಅರುಣ್ ಬಾಳಮಟ್ಟಿ ಮತ್ತು ಕಾಲೇಜಿನ ಶೈಕ್ಷಣಿಕ ಡೀನ್ ಡಾ ಕೆ ವಿ ಸುರೇಶರವರು ಉಪಸ್ಥಿತರಿದ್ದ ಕಾರ್ಯಕ್ರಮದಲ್ಲಿ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯಸ್ವಾಮಿ ಯವರು ಪ್ರಾರ್ಥಿಸಿದರು. ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ ಬಿ ವಿ ಸಾಂಬಶಿವಯ್ಯನವರು ಸ್ವಾಗತಿಸಿದರು. ಕಾಲೇಜಿನ ಪ್ರಾಂಶುಪಾಲರಾದ ಪ್ರೊ ಎಂ ಮಹದೇವಪ್ಪನವರು ವಂದಿಸಿದರು. ಪ್ರೊ ಡಿ ಎಸ್ ಸದಾಶಿವಮೂರ್ತಿ ಯವರು ಕಾರ್ಯಕ್ರಮವನ್ನು ನಿರೂಪಿಸಿದರು. ಕಾರ್ಯಕ್ರಮದಲ್ಲಿ ೩೦೦ಕ್ಕೂ ಹೆಚ್ಚಿನ ಬೋಧಕ, ಬೋಧಕೇತರರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಪ್ರಾಂಶುಪಾಲರು
(ಪ್ರೊ ಎಂ ಮಹದೇವಪ್ಪ)

ಪ್ರಾಂಶುಪಾಲರು
ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಊಟಿ ರಸ್ತೆ, ಮೈಸೂರು-570 025.

ಗೆ
ಸಂಪಾದಕರು
---------------
---------------
ಮೈಸೂರು